ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

**ಸೋಮವಾರ, ದಿನಾಂಕ: ೦೯ನೇ ಜುಲೈ, ೨೦೧೮**

---

## ಸಮೂಹ – I

೧. ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು

೩. ಸಾರಿಗೆ ಸಚಿವರು

೪. ಸಣ್ಣ ನೀರಾವರಿ ಸಚಿವರು

೫. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

---

## ಯುನಿವರ್ಸಲ್ ಹೆಲ್ತ್ ಸ್ಕೀಮ್ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)–**

೧(೨೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಯುನಿವರ್ಸಲ್ ಹೆಲ್ತ್ ಸ್ಕೀಮ್ ಯೋಜನೆ ಜಾರಿಗೆ ಬಂದಿದೆಯೇ ; ಬಂದಿದ್ದಲ್ಲಿ, ಈ ಯೋಜನೆಗೆ ಒಳಪಡುವ ಫಲಾನುಭವಿಗಳು ಯಾರ್‍ಯಾರು ; ರಾಜ್ಯದ ಯಾವ ಯಾವ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ ; (ವಿವರ ನೀಡುವುದು)

(ಆ) ಈ ಹಿಂದೆ ಜಾರಿಯಲ್ಲಿದ್ದ ವಿವಿಧ ಆರೋಗ್ಯ ಯೋಜನೆಗಳು ಜಾರಿಯಲ್ಲಿವೆಯೇ ; (ವಿವರ ಒದಗಿಸುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಲಭ್ಯವಿಲ್ಲವೆಂದು ಹಿಂಬರಹ ನೀಡಿದ್ದು, ಸದರಿಯವರುಗಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಬಿಲ್ಲನ್ನು ಮರು ಪಾವತಿ ಮಾಡದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಈ) ಖಾಸಗಿ ಆಸ್ಪತ್ರೆಯಲ್ಲಿ ಹೊಸ ಯೋಜನೆಯನ್ವಯ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಅಕ್ರಮ ಔಷಧಿಗಳ ಮಾರಾಟ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)–**

೨(೦೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜಧಾನಿ ಅಲ್ಲದೆ ಜಿಲ್ಲಾ ಕೇಂದ್ರಗಳಲ್ಲೂ ಅಮಲು ಮಿಶ್ರಿತ ಔಷಧಿಗಳು, ಮಾತ್ರೆ, ಇಂಜೆಕ್ಷನ್ ಮಾರಾಟ ದಂಧೆ ರಾಜ್ಯಾದ್ಯಾಂತ ರಾಜಾರೋಷವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾರಾಟ ಮಾಡಲು ಪರವಾನಿಗೆ ನೀಡದಿರುವ ಔಷಧಿಗಳ ಪಟ್ಟಿ ಒದಗಿಸುವುದು ;

(ಇ) ಅಕ್ರಮವಾಗಿ ಔಷಧ ಮಾರಾಟ ಮಾಡುತ್ತಿರುವ ಮಳಿಗೆ ಮೇಲೆ ದಾಳಿ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಶಿಕ್ಷೆಗೆ ಒಳಗಾಗಿರುವವರ (ಮಳಿಗೆ) ವಿವರ ನೀಡುವುದು ;

(ಈ) ವೈದ್ಯರ ಚೀಟಿ ಇಲ್ಲದೆ ಔಷಧ ಕೊಡಬಾರದೆಂಬ ನಿಯಮ ಇದೆಯೇ ?

## ಏತನೀರಾವರಿ ಯೋಜನೆಗಳಿಗಾಗಿ ಜಮೀನುಗಳನ್ನು ಕಳೆದು ಕೊಂಡಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩(೮೩) ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಜಂಬೂರು–ನುಗ್ಗೆಹಳ್ಳಿ ಮತ್ತು ಹಿರಿಸಾವೆ–ಜುಟ್ಟನಹಳ್ಳಿ ಏತನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಮಂಜೂರಾದ ಅನುದಾನದ ಸಂಪೂರ್ಣ ವಿವರ ನೀಡುವುದು ; ಈ ಯೋಜನೆಗಳ ಅನುಷ್ಠಾನಕ್ಕಾಗಿ ಇಲ್ಲಿಯವರೆಗೆ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಹಣದ ವಿವರ ನೀಡುವುದು ;

(ಆ) ಈ ಯೋಜನೆಗಳಿಗಾಗಿ ಭೂಸ್ವಾಧೀನ ಮಾಡಿಕೊಂಡಿರುವ ಜಮೀನುಗಳ ವಿವರ ಹಾಗೂ ಜಮೀನುಗಳ ಮಾಲೀಕರ ವಿವರ ನೀಡುವುದು ; ರೈತರಿಗೆ ಪರಿಹಾರವನ್ನು ನೀಡಲು ಸರ್ಕಾರವು ರೂಪಿಸಿರುವ ಮಾನದಂಡಗಳೇನು ;

(ಇ) ಈ ಯೋಜನೆಗಳಿಗಾಗಿ ಜಮೀನುಗಳನ್ನು ನೀಡಿರುವ ರೈತರಿಗೆ ಪರಿಹಾರ ಹಣವನ್ನು ಬಿಡುಗಡೆ ಮಾಡಲಾಗಿದೆಯೇ ; ಹಣ ಬಿಡುಗಡೆಯಾಗಿದ್ದಲ್ಲಿ, ಎಷ್ಟು ರೈತರಿಗೆ ಪರಿಹಾರವನ್ನು ಈಗಾಗಲೇ ನೀಡಲಾಗಿದೆ ; (ವಿವರ ನೀಡುವುದು) ಬಾಕಿ ರೈತರಿಗೆ ಪರಿಹಾರ ಹಣವನ್ನು ಬಿಡುಗಡೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಯಲ್ಲಿ ಅಂತರ್ಜಲದ ಬಗ್ಗೆ

**ಶ್ರೀ ಪಿ.ಆರ್. ರಮೇಶ್** (ನಾಮನಿರ್ದೇಶನ **ಹೊಂದಿದವರು**)–

೪(೯೯) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಂತರ್ಜಲದ ಇಂದಿನ ಸ್ಥಿತಿಗತಿಗಳ ಬಗೆಗಿನ ಮಾಹಿತಿ ನೀಡುವುದು ; ಈ ಎರಡು ಜಿಲ್ಲೆಗಳಲ್ಲಿ ಸರ್ಕಾರದ ಅಧೀನದಲ್ಲಿರುವ ಇಲಾಖೆಗಳು, ಸ್ಥಳೀಯ ಸಂಸ್ಥೆಗಳಿಂದ ಕೊರೆದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಹಾಗೂ ಖಾಸಗಿ ಕೊಳವೆ ಬಾವಿಗಳು ಎಷ್ಟು ;

(ಆ) ಈ ಎರಡು ಜಿಲ್ಲೆಗಳಲ್ಲಿ ಕೊರೆದಿರುವ ಕೊಳವೆ ಬಾವಿಗಳಲ್ಲಿ ನೀರು ಇರುವ ಕಡೆ (Water source) ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ನೀರು ಇಲ್ಲದೇ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಇ) ಈ ಎರಡು ಜಿಲ್ಲೆಗಳಲ್ಲಿ ೨೦ ವರ್ಷಗಳ ಹಿಂದೆ ಅಂತರ್ಜಲಮಟ್ಟ ಎಷ್ಟಿತ್ತು; ೨೦೧೮ರಲ್ಲಿ ಅಂತರ್ಜಲದ ಮಟ್ಟ ಎಷ್ಟಿದೆ ;

(ಈ) ಅಂತರ್ಜಲದ ಮೇಲುಸ್ತುವಾರಿ ಮಾಡುವುದಕ್ಕೆ/ವೃದ್ಧಿಗೊಳಿಸಲು/ನಿರ್ವಹಣೆ ಮಾಡಲು/ಹೆಚ್ಚಿಸಲು ಸರ್ಕಾರದಿಂದ ಕಾರ್ಯಗತಗೊಳಿಸಲು ಯಾವುದಾದರೊಂದು ಇಲಾಖೆ/ಸಂಸ್ಥೆ ಸರ್ಕಾರದ ಅಧೀನದಲ್ಲಿ ಇದೆಯೇ ; ಇದ್ದಲ್ಲಿ, ಕಳೆದ ೧೦ ವರ್ಷದ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು ;

(ಉ) ಅಂತರ್ಜಲದಲ್ಲಿರುವ ನೀರಿನ ಗಡಸುತನ (Hard Water) ವಿಶ್ಲೇಷಣೆ ಮಾಡುವ ಇಲಾಖೆ ಇದೆಯೇ ; ಇದ್ದಲ್ಲಿ ಕಳೆದ ೧೦ ವರ್ಷದ ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು ;

(ಊ) ಈ ಎರಡೂ ಜಿಲ್ಲೆಗಳಲ್ಲಿ ಎಷ್ಟು ಜನಸಂಖ್ಯೆಯ ನಾಗರೀಕರು ಕೊಳವೆ ಬಾವಿ ಆಧಾರದ ಕುಡಿಯುವ ನೀರಿನ ಮೇಲೆ ಅವಲಂಬಿತರಾಗಿದ್ದಾರೆ ; (ವಿವರ ನೀಡುವುದು)

(ಋ) ಈ ಎರಡೂ ಜಿಲ್ಲೆಯ ಅಂತರ್ಜಲದ ಬಗ್ಗೆ ಅಂತರರಾಷ್ಟ್ರೀಯ/ರಾಷ್ಟ್ರೀಯ ಸಂಸ್ಥೆಗಳಿಂದ ಯಾವುದಾದರೂ ವರದಿ ಬಂದಿದೆಯೇ ; ಬಂದಿದ್ದಲ್ಲಿ, ದಾಖಲಾತಿಗಳೊಂದಿಗೆ ವಿವರಗಳನ್ನು ನೀಡುವುದು ?

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)–**

೫(೧೩೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೪ ವರ್ಷಗಳ ಅವಧಿಯಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮುಖಾಂತರ ರಾಜ್ಯದ ಎಷ್ಟು ಹಳ್ಳಿಗಳಿಗೆ ರಸ್ತೆ ಸಂಪರ್ಕವನ್ನು ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಗೆ ಕೇಂದ್ರ ಸರ್ಕಾರವು ಎಷ್ಟು ಅನುದಾನ ನೀಡಿದೆ ; ಎಷ್ಟು ಮೊತ್ತವನ್ನು ಬಳಸಲಾಗಿದೆ ; ಬಳಸಲಾಗದೆ ಹಿಂತಿರುಗಿಸಿದ ಮೊತ್ತವೆಷ್ಟು ;

(ಇ) ಕಳೆದ ೪ ವರ್ಷಗಳ ಅವಧಿಯಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮುಖಾಂತರ ಎಷ್ಟು ಕಿಲೋ ಮೀಟರ್ ರಸ್ತೆಯು ನಿರ್ಮಾಣವಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಮಾನ್ವಿ ತಾಲ್ಲೂಕಿನಲ್ಲಿರುವ ಕೆರೆಗಳ ನಿರ್ಮಾಣದ ಬಗ್ಗೆ

**ಶ್ರೀ ಎನ್. ಎಸ್. ಬೋಸರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)–**

೬(೯೨) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಾನ್ವಿ ತಾಲ್ಲೂಕಿನ ಸುಂಕೇಶ್ವರ ಮತ್ತು ಮದ್ಲಾಪುರ ಕೆರೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಡಾ: ನಂಜುಂಡಪ್ಪ ವರದಿ ಪ್ರಕಾರ ಅತ್ಯಂತ ಹಿಂದುಳಿದ ಈ ಪ್ರದೇಶದ ಅಭಿವೃದ್ಧಿಗಾಗಿ ಕೆರೆಗಳ ಅಭಿವೃದ್ಧಿ ನಾಡಿನ ಶ್ರೇಯೋಭಿವೃದ್ಧಿ ಯೋಜನೆ ಅಡಿಯಲ್ಲಿ ಆದ್ಯತೆ ಮೇರೆಗೆ ಈ ಕಾಮಗಾರಿಗಳನ್ನು ಕೈಗೊಳ್ಳಲಾಗುವುದೇ ;

(ಇ) ಕೆರೆ ಸಂಜೀವಿನಿ ಯೋಜನೆ ಅಡಿಯಲ್ಲಿ ಮಾನ್ವಿ ತಾಲ್ಲೂಕಿನಲ್ಲಿನ ಕೆರೆಗಳಲ್ಲಿನ ಹೂಳೆತ್ತುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೇ ?

## ತುಮಕೂರು ನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯುವ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೭(೭೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಮಕೂರು ನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯಲು ಈ ಹಿಂದಿನ ಸರ್ಕಾರ ನಿರ್ಧರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಆಸ್ಪತ್ರೆ ತೆರೆಯಲು ತುಮಕೂರು ನಗರದಲ್ಲಿ ಎಲ್ಲಿ ಸ್ಥಳವನ್ನು ಗುರುತಿಸಲಾಗಿದೆ ; ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ೨೦೧೭–೧೮ನೇ ಸಾಲಿನಲ್ಲಿ ಈ ಆಸ್ಪತ್ರೆಯನ್ನು ತೆರೆಯಲು ಒದಗಿಸಿರುವ ಅನುದಾನವೆಷ್ಟು ; ಈ ಅನುದಾನದಲ್ಲಿ ಖರ್ಚಾಗಿರುವ ಹಣವೆಷ್ಟು ; ಕಾಮಗಾರಿಯು ಯಾವ ಹಂತದಲ್ಲಿ ನಡೆಯುತ್ತಿದೆ ? (ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)–**

೮(೯೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಿಂದ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಿದೆ ; (ಅವುಗಳ ವಿವರ ನೀಡುವುದು)

(ಇ) ಮೇಲ್ದರ್ಜೆಗೇರಿಸಲು ಅನುಸರಿಸುವ ಮಾನದಂಡಗಳೇನು ;

(ಈ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಕೊಪ್ಪ ಗ್ರಾಮವು ಹೋಬಳಿ ಕೇಂದ್ರವಾಗಿದ್ದು, ಸುತ್ತಮುತ್ತ ೪೦ ಹಳ್ಳಿಗಳು ಬರುತ್ತಿದ್ದು ಕೊಪ್ಪದ ಪ್ರಾಥಮಿಕ ಕೇಂದ್ರವನ್ನು ಯಾವಾಗ ಸಮುದಾಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗುವುದು ; (ವಿವರ ನೀಡುವುದು)

(ಉ) ಈ ಕೇಂದ್ರವನ್ನು ಮೇಲ್ದರ್ಜೇಗೇರಿಸಿ ಹೆಚ್ಚಿನ ವೈದ್ಯ ಸಿಬ್ಬಂದಿ ಮತ್ತು ಸೌಲಭ್ಯವನ್ನು ನೀಡಿ ೨೪ ಗಂಟೆ ಚಿಕಿತ್ಸೆ ನೀಡುವಂತೆ ಕ್ರಮ ಕೈಗೊಳ್ಳಲು ತೆಗೆದುಕೊಂಡ ಕ್ರಮಗಳೇನು ?

## ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯಕೀಯ ಸೌಲಭ್ಯಗಳ ಕೊರತೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೯(೪೫) ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಾಮರಾಜನಗರ ಜಿಲ್ಲಾಸ್ಪತ್ರೆಗೆ (ಚಾಮರಾಜನಗರ ವೈದ್ಯಕೀಯ ವಿಜ್ಞಾನ ಕಾಲೇಜಿನ ಆಸ್ಪತ್ರೆ) ಮಂಜೂರಾಗಿರುವ ವೈದ್ಯಕೀಯ, ಅರೆ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿ ಸಂಖ್ಯೆ ಎಷ್ಟು ; ಹಾಲಿ ಭರ್ತಿಯಾಗಿ ಸೇವೆ ಸಲ್ಲಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; (ಹುದ್ದೆವಾರು ವಿವರ ಒದಗಿಸುವುದು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಆ) ಈಗ ಇರುವ ವಾರ್ಡ್‌ಗಳ ಸಂಖ್ಯೆ ಎಷ್ಟು ; ಸ್ತ್ರೀಯರು, ಪುರುಷರು, ಮಕ್ಕಳು ಬಾಣಂತಿಯರ ವಾರ್ಡ್‌ಗಳು ಮತ್ತು ಹಾಸಿಗೆಗಳೆಷ್ಟು ; (ವಿವರ ನೀಡುವುದು) ರೋಗಿಗಳಿಗೆ ಹಾಸಿಗೆಗಳು ಮತ್ತು ಜಾಗದ ಕೊರತೆ ಎದುರಾಗಿದೆಯೇ ; ಇದನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸದರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ, ಬಾಣಂತಿಯರಿಗೆ ಸೂಕ್ತ ಸೌಲಭ್ಯ ಇಲ್ಲದೆ ನೆಲದ ಮೇಲೆ ಮಲಗಿರುವ ಪ್ರಕರಣಗಳು, ರೋಗಿಗಳಿಗೆ ಅವರ ಕೇರ್‌ಟೇಕರ್‌ಗಳಿಗೆ ಊಟ ಮಾಡಲು, ಕುಳಿತುಕೊಳ್ಳಲು ಸರಿಯಾದ ಸ್ಥಳ ಇಲ್ಲದಿರುವುದು, ಸರಿಯಾದ ಸ್ವಚ್ಛತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಗಮನಹರಿಸಿ ರೋಗಿಗಳಿಗೆ ಹಾಗೂ ಅವರನ್ನು ನೋಡಿಕೊಳ್ಳುವವರಿಗೆ ಸೂಕ್ತ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ ?

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೦(೫೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೫ ವರ್ಷಗಳಲ್ಲಿ ವಿವಿಧ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಮಂಜೂರಾದ ವರ್ಷವಾರು, ಜಿಲ್ಲಾವಾರು ವಿವರ ನೀಡುವುದು ;

(ಆ) ನೀರಿನ ಘಟಕವಾರು ಖರ್ಚಾದ ಹಣ ಎಷ್ಟು ; (ತಾಲ್ಲೂಕುವಾರು, ಜಿಲ್ಲಾವಾರು, ಸಂಪೂರ್ಣ ಮಾಹಿತಿ ನೀಡುವುದು)

(ಇ) ಮಂಜೂರಾದ ಘಟಕಗಳಲ್ಲಿ ಎಷ್ಟು ಘಟಕಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆ ; (ಸ್ಪಷ್ಟ ಮಾಹಿತಿ ಒದಗಿಸುವುದು)

(ಈ) ಈ ಘಟಕಗಳು ಸರಿಯಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? (ಸ್ಪಷ್ಟ ವಿವರ ನೀಡುವುದು)

## ಎಲೆಮಲ್ಲಪ್ಪ ಕೆರೆ ನೀರನ್ನು ಏತ ನೀರಾವರಿ ಯೋಜನೆ ಮೂಲಕ ದಕ್ಷಿಣ ಪಿನಾಕಿನಿ ನದಿಗೆ ಹರಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೧(೮೬) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಎಲೆ ಮಲ್ಲಪ್ಪ ಕೆರೆ ನೀರನ್ನು ಏತ ನೀರಾವರಿ ಯೋಜನೆಯ ಮೂಲಕ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ದಕ್ಷಿಣ ಪಿನಾಕಿನಿ ನದಿಗೆ ಹರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಯೋಜನೆಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಸದರಿ ಯೋಜನೆಯ ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ಸದರಿ ಯೋಜನೆಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಖರ್ಚಾದ ಮತ್ತು ಖರ್ಚಾಗದೇ ಉಳಿದಿರುವ ಹಣ ಎಷ್ಟು ; ಸದರಿ ಯೋಜನೆಯು ಪ್ರಾರಂಭವಾಗಿದ್ದಲ್ಲಿ ಎಲೆ ಮಲ್ಲಪ್ಪ ಕೆರೆ ನೀರು ದಕ್ಷಿಣ ಪಿನಾಕಿನಿ ನದಿಗೆ ತಲುಪಿದೆಯೇ ;

(ಈ) ಸದರಿ ಯೋಜನೆಯು ಅನುಷ್ಠಾನಗೊಳ್ಳದೇ ಇದ್ದಲ್ಲಿ ಸರ್ಕಾರಕ್ಕಿರುವ ಅಡೆತಡೆಗಳೇನು ; ಕಾಮಗಾರಿ ಪ್ರಾರಂಭಗೊಂಡಿದ್ದು ಯೋಜನೆ ಪೂರ್ಣಗೊಳ್ಳದಿರಲು ಕಾರಣಗಳೇನು ;

(ಉ) ಸದರಿ ಯೋಜನೆ ಪೂರ್ಣಗೊಳಿಸಲು ಇರುವ ಅಡೆತಡೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು ?

## ನಕಲಿ ವೈದ್ಯ ಸರ್ಟಿಫಿಕೇಟ್ ಮಾರಾಟ ಜಾಲದ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು)–**

೧೨(೮೫) ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಕಲಿ ವೈದ್ಯ ಸರ್ಟಿಫಿಕೇಟ್‌ಗಳನ್ನು ಸೃಷ್ಟಿಸಿ ಮಾರಾಟ ಮಾಡುವುದು ಮತ್ತು ಅಂಕ ಪಟ್ಟಿಗಳನ್ನು ತಿದ್ದುವ ಅಕ್ರಮ ಧಂದೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಪೂರ್ಣ ವಿವರ ನೀಡುವುದು ; ಬರದಿದ್ದಲ್ಲಿ, ಈ ಬಗ್ಗೆ ಕೂಲಂಕಷವಾಗಿ ವಿಚಾರಣೆ ನಡೆಸಿ ತಕ್ಷಣ ಕ್ರಮಕೈಗೊಳ್ಳಾಗುವುದೇ ;

(ಇ) ಸದರಿ ಧಂದೆಯಲ್ಲಿ ತಪ್ಪಿತಸ್ಥ ವೈದ್ಯಕೀಯ ಕಾಲೇಜುಗಳ ಮೇಲೆ ಮತ್ತು ಅಕ್ಷಮ್ಯ ಅಪರಾಧ ಎಸಗಿದವರ ಮೇಲೆ ಕಾನೂನು ರೀತ್ಯಾ ತೆಗೆದುಕೊಂಡ ಕ್ರಮಗಳ ಪೂರ್ಣ ವಿವರ ನೀಡುವುದು ?

## ಗದಗಿನ ಜಿಮ್ಸ್ (GIMS) ಆಸ್ಪತ್ರೆಯ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)–**

ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ
೧೩(೯೭) ~~ಆರೋಗ್ಯ ಮತ್ತು ಕುಟುಂಬ ಕಲ್ಯಾಣ~~ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗದಗಿನ ಜಿಮ್ಸ್ (GIMS) ಆಸ್ಪತ್ರೆಯಲ್ಲಿ ಒಳರೋಗಿಗಳಿಗೆ ನಿತ್ಯ ಉಪಯೋಗಿಸಲು ಬೇಕಾಗಿರುವ ನೀರು ಮತ್ತು ಕುಡಿಯುವ ನೀರಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದರ ಪರಿಹಾರಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಗದಗಿನ ಜಿಮ್ಸ್ (GIMS) ಆಸ್ಪತ್ರೆಯಲ್ಲಿ ಎಂ.ಡಿ.ಆರ್. ಟಿ. ಬಿ. ರೋಗಿಗಳಿಗೆ ವೈದ್ಯಕೀಯ ಚಿಕಿತ್ಸೆ ಕೊಡಲು ಪ್ರತ್ಯೇಕ ವಾರ್ಡಿನ ವ್ಯವಸ್ಥೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಎಂ.ಡಿ.ಆರ್. ಟಿ.ಬಿ. ಚಿಕಿತ್ಸೆ ನೀಡಲು ತಜ್ಞ ವೈದ್ಯರ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ ?

## ಕ್ಯಾತನಹಳ್ಳಿ ಏತನೀರಾವರಿ ಯೋಜನೆಗಾಗಿ ಜಮೀನು ಕಳೆದುಕೊಂಡ ರೈತರಿಗೆ ಪರಿಹಾರ ಧನ ನೀಡುವ ಬಗ್ಗೆ

**ಶ್ರೀ ಆರ್. ಧರ್ಮಸೇನಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೪(೬೧) ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ಜಿಲ್ಲೆ, ಹಾಸನ ತಾಲ್ಲೂಕು, ಸಾಲಗಾಮೆ ಹೋಬಳಿ ಚಿಕ್ಕಗದ್ದುವಳ್ಳಿ, ಕ್ಯಾತನಹಳ್ಳಿ ಮುಂತಾದ ಗ್ರಾಮಗಳ ರೈತರ ಜಮೀನುಗಳನ್ನು ಯಗಚಿನಾಲೆ ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಗಾಗಿ ಭೂಸ್ವಾಧೀನಪಡಿಸಿಕೊಂಡಿದ್ದು, ಭೂಪರಿಹಾರ ಧನ ಕಡಿಮೆ ಕೊಟ್ಟಿರುವುದರಿಂದ ರೈತರು ನ್ಯಾಯಾಲಯದಲ್ಲಿ ದಾವೆ ಹೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಸನದ ಸಿವಿಲ್ ನ್ಯಾಯಾಲಯದಲ್ಲಿ ರೈತರಿಗೆ ಹೆಚ್ಚಿನ ಭೂಪರಿಹಾರ ನೀಡುವಂತೆ ಆದೇಶ ನೀಡಿ ೧೮ ತಿಂಗಳು ಕಳೆದರೂ ಇನ್ನೂ ನೀಡದಿರಲು ಕಾರಣವೇನು ;

(ಇ) ಕಳೆದ ಅಧಿವೇಶನದಲ್ಲಿ ಸರ್ಕಾರವು ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದರೂ ಸಹ ಇದುವರೆವಿಗೂ ರೈತರಿಗೆ ಪರಿಹಾರಧನ ಪಾವತಿಯಾಗದಿರುವುದರಿಂದ ಆದಷ್ಟು ಶೀಘ್ರವಾಗಿ ಹೆಚ್ಚುವರಿ ಪರಿಹಾರಧನವನ್ನು ರೈತರಿಗೆ ಕೊಡಿಸುವ ವ್ಯವಸ್ಥೆ ಮಾಡಲಾಗುವುದೇ ?

## ಬಿ.ಆರ್.ಸಿ. ಮತ್ತು ಸಿ.ಆರ್.ಸಿ.ಗಳನ್ನು ಮುಂದುವರಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ)–**

೧೫(೬೫) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೧–೧೨ನೇ ಸಾಲಿನಲ್ಲಿ NRDWP ಯೋಜನೆಯಡಿ ಕಾರ್ಯನಿರ್ವಹಿಸುತ್ತಿದ್ದ BRC/CRC ಗಳನ್ನು ಯಥಾವತ್ತಾಗಿ ಮುಂದುವರೆಸುವ ಸಂಬಂಧ ಸರ್ಕಾರ ಹೊರಡಿಸಿರುವ ಆದೇಶವೇನು ; (ವಿವರ ನೀಡುವುದು)

(ಆ) ಸರ್ಕಾರಿ ಆದೇಶ ಹೊರಡಿಸದೆ ಕೇವಲ ದಿನಾಂಕ: ೦೩.೧೧.೨೦೧೭ರಂದು ಪತ್ರ ಬರೆದಿರುವುದು ನಿಜವೇ ;

(ಇ) ಸದರಿ ಪತ್ರದ ಅನುಸಾರ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಅಧಿಕಾರಿಗಳು ಸರ್ಕಾರದ ನಿರ್ಣಯದಂತೆ ಕ್ರಮ ಕೈಗೊಳ್ಳುತ್ತಾರೆಂದು ಭರವಸೆ ನೀಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ದಿನಾಂಕ: ೦೩.೧೧.೨೦೧೭ರ ಪತ್ರದ ಅನುಸಾರ ಎಷ್ಟು ಜಿಲ್ಲಾ ಪಂಚಾಯಿತಿಗಳಲ್ಲಿ ಎಷ್ಟು BRC/CRC ಗಳನ್ನು ಸರ್ಕಾರದ ಆದೇಶದಂತೆ ಕ್ರಮ ಕೈಗೊಂಡು ಆದೇಶ ಹೊರಡಿಸಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಉ) ಸರ್ಕಾರದ ಆದೇಶದಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕ್ರಮ ಕೈಗೊಳ್ಳದಿದ್ದರೆ ಸರ್ಕಾರ ನಿರುದ್ಯೋಗಿ ಪದವೀಧರ BRC/CRC ಗಳಿಗೆ ಯಾವ ರೀತಿ ನ್ಯಾಯ ಒದಗಿಸುವುದು ;

(ಊ) ಇದರ ಸಂಬಂಧ ಸರ್ಕಾರದ ನಿಲುವೇನು ; ಸರ್ಕಾರಿ ಆದೇಶವನ್ನು ಯಾವ ಕಾಲಮಿತಿಯೊಳಗೆ ಹೊರಡಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ..277 ಪ್ರತಿಗಳು 1500 – ಪಿ8